**All India Radio: Bangalore**
**National Bulletin In Kannada**
**27.01.2026 1.10 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**27.01.2026 1.10 pm**

**<>><><*><><<>**

ಮುಖ್ಯಾಂಶಗಳು

**೧. ಐರೋಪ್ಯ ಒಕ್ಕೂಟದ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ**

**೨. ಭಯೋತ್ಪಾದನೆಯನ್ನು ರಾಜ್ಯನೀತಿಯ ಸಾಧನವಾಗಿ ಪಾಕಿಸ್ತಾನ ಬಳಸುವುದನ್ನು ಸಹಿಸಲು ಸಾಧ್ಯವಿಲ್ಲ- ಭಾರತ ಎಚ್ಚರಿಕೆ**

**೩. ಬಜೆಟ್ ಅಧಿವೇಶನಕ್ಕೂ ಮುನ್ನ ನವದೆಹಲಿಯಲ್ಲಿಂದು ಸರ್ವಪಕ್ಷ ಸಭೆ ಪ್ರಗತಿಯಲ್ಲಿ**

**೪. ನಾಲ್ಕನೇ ಆವೃತ್ತಿಯ ಭಾರತ ಇಂಧನ ಸಪ್ತಾಹಕ್ಕೆ ವರ್ಚವಲ್ ಮೂಲಕ ಪ್ರಧಾನಿ ಚಾಲನೆ**

**೫. ೧೯ ವರ್ಷದೊಳಗಿನವರ ಏಕದಿನ ಕ್ರಿಕೆಟ್ ; ಭಾರತದ ವಿರುದ್ಧ ಟಾಸ್ ಗೆದ್ದ ಜಿಂಬಾಬ್ವೆ ಫೀಲ್ಡಿಂಗ್ ಆಯ್ಕೆ**

**<>><><*><><<>**

ಐರೋಪ್ಯ ಆಯೋಗದ ಅಧ್ಯಕ್ಷ ಆಂಟೋನಿಯೊ ಲೂಯಿಸ್ ಸ್ಯಾಂಟೋಸ್ ಡ ಕೋಸ್ಟಾ ಮತ್ತು ಐರೋಪ್ಯ ಆಯೋಗದ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆಯಲ್ಲಿ ತೊಡಗಿದ್ದಾರೆ. ನಿಯೋಗಮಟ್ಟದ ಮಾತುಕತೆ ಸಂದರ್ಭದಲ್ಲಿ ಹಲವು ಒಪ್ಪಂದಗಳು ಏರ್ಪಡುವ ನಿರೀಕ್ಷೆಯಿದೆ. ಇದಕ್ಕೂ ಮುನ್ನ ಪ್ರತಿಕ್ರಿಯಿಸಿರುವ ವಾಣಿಜ್ಯ ಕಾರ್ಯದರ್ಶಿ ರಾಜೇಶ್ ಅಗರ್ವಾಲ್, ಭಾರತ ಮತ್ತು ಐರೋಪ್ಯ ಒಕ್ಕೂಟ ಇಂದು ಘೋಷಿಸಲಿರುವ ಪ್ರಸ್ತಾವಿತ ಮುಕ್ತ ವ್ಯಾಪಾರ ಒಪ್ಪಂದಕ್ಕಾಗಿ ಅಧಿಕೃತ ಮಟ್ಟದ ಮಾತುಕತೆಗಳನ್ನು ಪೂರ್ಣಗೊಳಿಸಿವೆ ಎಂದು ತಿಳಿಸಿದ್ದಾರೆ.

**<>><><*><><<>**

ಐರೋಪ್ಯ ಒಕ್ಕೂಟದೊಂದಿಗೆ ಭಾರತದ ಬೆಳೆಯುತ್ತಿರುವ ಪಾಲುದಾರಿಕೆಯನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಪುನರುಚ್ಚರಿಸಿದರು. ನವದೆಹಲಿಯಲ್ಲಿಂದು ಐರೋಪ್ಯ ಒಕ್ಕೂಟದ ನಿಯೋಗದೊಂದಿಗೆ ಅವರು ಸಭೆ ನಡೆಸಿದರು. ರಕ್ಷಣಾ ಸಹಕಾರವನ್ನು ಅಭಿವೃದ್ಧಿಪಡಿಸಲು ಜಾಗತಿಕವಾಗಿ ಈ ಪಾಲುದಾರಿಕೆ ಎರಡು ಕಡೆಯವರನ್ನು ಒಟ್ಟುಗೂಡಿಸುತ್ತದೆ ಎಂದು ಹೇಳಿದ

ಅವರು, ಜಾಗತಿಕ ಶಾಂತಿ ಮತ್ತು ಭದ್ರತೆಗೆ ದೇಶದ ಬದ್ಧತೆಯನ್ನು ಸಚಿವ ರಾಜನಾಥ್ ಸಿಂಗ್ ಒತ್ತಿ ಹೇಳಿದರು.

**<>><><*><><<>**

ಆಪರೇಷನ್ ಸಿಂದೂರ ಕುರಿತು ವಿಶ್ವಸಂಸ್ಥೆಯಲ್ಲಿ ಪಾಕಿಸ್ತಾನದ ಸುಳ್ಳು ನಿರೂಪಣೆಯನ್ನು ಭಾರತ ತಿರಸ್ಕರಿಸಿದೆ. ಜೊತೆಗೆ ಪಾಕಿಸ್ತಾನಕ್ಕೆ ತಿರುಗೇಟು ನೀಡಿದೆ. ಭಾರತದ ಆಂತರಿಕ ವಿಷಯದ ಬಗ್ಗೆ, ವಿಶೇಷವಾಗಿ ಜಮ್ಮು ಮತ್ತು ಕಾಶ್ಮೀರದ ಬಗ್ಗೆ ಪ್ರತಿಕ್ರಿಯಿಸಲು ಪಾಕಿಸ್ತಾನಕ್ಕೆ ಯಾವುದೇ ಅರ್ಹತೆಯಿಲ್ಲ ಎಂದು ಭಾರತ ಪ್ರತಿಪಾದಿಸಿದೆ. ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ಮುಕ್ತ ಚರ್ಚೆಯ ಸಂದರ್ಭದಲ್ಲಿ ಪಾಕಿಸ್ತಾನ ರಾಯಭಾರಿ ಅಸಿಮ್ ಇಫ್ತಿಕರ್ ಅಹಮ್ಮದ್ ಅವರ ಹೇಳಿಕೆಗೆ ಪ್ರತಿಕ್ರಿಯೆ ನೀಡಿರುವ ವಿಶ್ವಸಂಸ್ಥೆಯಲ್ಲಿ ಭಾರತದ ಖಾಯಂ ಪ್ರತಿನಿಧಿ ಪಿ. ಹರೀಶ್, ಭಯೋತ್ಪಾದನೆಯನ್ನು ಪಾಕಿಸ್ತಾನ ರಾಜ್ಯನೀತಿಯ ಸಾಧನವಾಗಿ ಬಳಸುವುದನ್ನು ಸಹಿಸಲು ಸಾಧ್ಯವಿಲ್ಲ ಎಂದು ಎಚ್ಚರಿಸಿದ್ದಾರೆ.

**<>><><*><><<>**

ಬಜೆಟ್ ಅಧಿವೇಶನಕ್ಕೂ ಮುನ್ನ ಪ್ರಮುಖ ರಾಷ್ಟ್ರೀಯ ಸಮಸ್ಯೆಗಳು ಮತ್ತು ಶಾಸಕಾಂಗ ವ್ಯವಹಾರಗಳನ್ನು ಚರ್ಚಿಸಲು ನವದೆಹಲಿಯ ಸಂಸತ್ ಭವನದ ಆವರಣದಲ್ಲಿಂದು ಇಂದು ಸರ್ವಪಕ್ಷ ಸಭೆ ಪ್ರಗತಿಯಲ್ಲಿದೆ.  ಸಭೆಯು ನಾಳೆಯಿಂದ ಏಪ್ರಿಲ್ ೨ ರವರೆಗೆ ನಡೆಯುವ ಅಧಿವೇಶನದಲ್ಲಿ ಶಾಸಕಾಂಗ ವ್ಯವಹಾರಗಳನ್ನು ಸುಗಮಗೊಳಿಸುವ ಮತ್ತು ಪ್ರಮುಖ ರಾಷ್ಟ್ರೀಯ ಸಮಸ್ಯೆಗಳನ್ನು ನಿರ್ವಹಿಸುವ ಗುರಿಯನ್ನು ಹೊಂದಿದೆ. ಮೊದಲ ಹಂತದ ಅಧಿವೇಶನವು ನಾಳೆಯಿಂದ  ಫೆಬ್ರವರಿ ೧೩ ರವರೆಗೆ ನಿಗದಿಯಾಗಿದ್ದು, ಎರಡನೇ ಹಂತದ ಅಧಿವೇಶನವು ಮಾರ್ಚ್ ೯ ರಿಂದ ಏಪ್ರಿಲ್ ೨ ರವರೆಗೆ ನಡೆಯಲಿದೆ.

**<>><><*><><<>**

ಸಕ್ರಿಯ ಆಡಳಿತ ಮತ್ತು ಸಕಾಲಿಕ ಅನುಷ್ಠಾನಕ್ಕಾಗಿ ಪ್ರಧಾನಮಂತ್ರಿಯವರ ಪ್ರಮುಖ ವೇದಿಕೆಯಾದ ಪ್ರಗತಿ, ತನ್ನ ೫೦ನೇ ಸಭೆಯನ್ನು ಯಶಸ್ವಿಯಾಗಿ ನಡೆಸುವುದರೊಂದಿಗೆ ಮಹತ್ವದ ಮೈಲಿಗಲ್ಲು ಸಾಧಿಸಿದೆ. ಇಂದು ಈ ವಿಶೇಷ ಸರಣಿಯಲ್ಲಿ ಒಡಿಶಾದ ಹರಿದಾಸ್‌ಪುರ - ಪರದೀಪ್ ನೂತನ ರೈಲು ಮಾರ್ಗ ಕುರಿತು ವರದಿ ಇದೀಗ ಮೂಡಿಬರಲಿದೆ.

**ವಿಶೇಷ ವರದಿ : ಶ್ರೀಲಕ್ಷ್ಮಿ ( ೪೮  ಸೆಕೆಂಡ್‌ಗಳು)**

**<>><><*><><<>**

ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದವು ಭಾರತ-ಇಯು ವ್ಯಾಪಾರ ಒಪ್ಪಂದಕ್ಕೆ ಪೂರಕವಾಗಿದೆ. ಇದು ಉತ್ಪಾದನೆ ಮತ್ತು ಸೇವಾ ವಲಯವನ್ನು ಉತ್ತೇಜಿಸುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಗೋವಾದ ಒಎನ್‌ಜಿಸಿ ಬೇತುಲ್‌ನಲ್ಲಿ ಇಂದಿನಿಂದ ೩೦ ರವರೆಗೆ, ಆಯೋಜಿಸಿರುವ ಭಾರತ ಇಂಧನ ಸಪ್ತಾಹ ೨೦೨೬ ರ ನಾಲ್ಕನೇ ಆವೃತ್ತಿಯ ಸಮಾವೇಶವನ್ನು ಅವರು ವರ್ಚುವಲ್ ಮೂಲಕ ಉದ್ಘಾಟಿಸಿ ಮಾತನಾಡಿದರು. ಬೇಡಿಕೆ ನಿರಂತರವಾಗಿ ಹೆಚ್ಚುತ್ತಿರುವ ಕಾರಣ, ಇಂಧನ ವಲಯಕ್ಕೆ ಭಾರತ ಅವಕಾಶಗಳ ಆಗರವಾಗಿದೆ. ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದವು ವಿಶ್ವದ ಎರಡು ದೊಡ್ಡ ಆರ್ಥಿಕತೆಗಳ ನಡುವಿನ ಸಮನ್ವಯವಾಗಿದ್ದು, ಜಾಗತಿಕ ವ್ಯಾಪಾರ ಮತ್ತು ಪೂರೈಕೆ ಸರಪಳಿಯ ಮೂರನೇ ಒಂದು ಭಾಗದಷ್ಟು ಕೊಡುಗೆ ನೀಡುತ್ತದೆ ಎಂದು ಅವರು ತಿಳಿಸಿದರು.

**<>><><*><><<>**

ಕಲಾ ಕ್ಷೇತ್ರದಲ್ಲಿ ಅಪ್ರತಿಮ ಸೇವೆಯನ್ನು ಗುರುತಿಸಿ, ಬಹುಶ್ರುತ ವಿದ್ವಾಂಸರಾದ ಶತಾವಧಾನಿ ಡಾ.ಆರ್.ಗಣೇಶ್ ಅವರಿಗೆ ಕೇಂದ್ರ ಸರ್ಕಾರ, ಈ ಬಾರಿಯ ದೇಶದ ಅತ್ಯುನ್ನತ ನಾಗರಿಕ ಪ್ರತಿಷ್ಠಿತ ಪ್ರಶಸ್ತಿಗಳಲ್ಲಿ ಒಂದಾದ ಪದ್ಮಭೂಷಣ ಪ್ರಶಸ್ತಿಯನ್ನು ಘೋಷಿಸಿದೆ. ಅವಧಾನ ಕಲೆಯನ್ನು ಕರಗತ ಮಾಡಿಕೊಂಡಿರುವ ಇವರು ಕನ್ನಡ, ಸಂಸ್ಕೃತ, ತೆಲುಗು ಮತ್ತು ಪ್ರಾಕೃತ ಭಾಷೆಗಳಲ್ಲಿ ಒಂದು ಸಾವಿರದ ೩೦೦ಕ್ಕೂ ಹೆಚ್ಚು ಅವಧಾನಗಳನ್ನು ಮಾಡಿ, ದಾಖಲೆ ನಿರ್ಮಿಸಿದ್ದಾರೆ. ನಶಿಸಿ ಹೋಗುತ್ತಿದ್ದ ಅಷ್ಟಾವಧಾನ ಕಲೆಯನ್ನು ಮತ್ತೆ ಪುನರುಜ್ಜೀವನಕ್ಕೆ ತಂದು ಶತಾವಧಾನ ಕಲೆಯನ್ನು ಸಿದ್ಧಿಸಿಕೊಂಡಿರುವ ಅವರು ಕಾವ್ಯಮೀಮಾಂಸೆ, ಛಂದಶ್ಯಾಸ್ತ್ರ, ವೇದಾಂತ, ಉಪನಿಷತ್, ಧರ್ಮಶಾಸ್ತ್ರ, ಇತಿಹಾಸ, ಸಂಸ್ಕೃತಿ, ಕಲೆ, ಭಾರತೀಯ ತತ್ವಶಾಸ್ತ್ರ, ವ್ಯಾಕರಣ, ಅಲಂಕಾರ ಶಾಸ್ತ್ರ ಹೀಗೆ ಹತ್ತು ಹಲವು ವಿವಿಧ ಕ್ಷೇತ್ರಗಳಲ್ಲಿ ಅಪಾರ ಪಾಂಡಿತ್ಯ ಪಡೆದಿರುವುದಲ್ಲದೇ, ಸಂಗೀತ, ನೃತ್ಯ, ಚಿತ್ರಕಲೆ ಮುಂತಾದವುಗಳಲ್ಲಿಯೂ ಸಹ ಪ್ರಾವೀಣ್ಯ ಪಡೆದಿದ್ದಾರೆ. ಭರತನಾಟ್ಯಕ್ಕಾಗಿಯೇ ಅನೇಕ ತಿಲ್ಲಾನಗಳನ್ನೂ ರಚಿಸಿದ್ದಾರೆ. ಸಾರಸ್ವತ ಲೋಕದಲ್ಲಿನ ಸಾಧನೆಗಳನ್ನು ಪರಿಗಣಿಸಿ ಕೊಡಮಾಡಿರುವ ಪದ್ಮಭೂಷಣ ಪ್ರಶಸ್ತಿಗೆ ಭಾಜನರಾಗಿರುವ ಡಾ. ಶತಾವಧಾನಿ ಆರ್.ಗಣೇಶ್ ಅವರು ಆಕಾಶವಾಣಿಯೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ : ಡಾ. ಶತಾವಧಾನಿ ಆರ್.ಗಣೇಶ್ ( ೪೭ ಸೆಕೆಂಡ್ಸ್)**

**<>><><*><><<>**

ಏರೋಸ್ಪೇಸ್ ತಂತ್ರಜ್ಞಾನ ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ಮಹತ್ವದ ಕೊಡುಗೆ ನೀಡಿರುವ ಡಾ. ಶುಭಾ ವೆಂಕಟೇಶ ಅಯ್ಯಂಗಾರ್ ಅವರಿಗೆ ಪ್ರಸಕ್ತ ಸಾಲಿನ ಪದ್ಮಶ್ರೀ ಗೌರವ ಸಂದಿದೆ.

ಶುಭಾ ಅವರು ನ್ಯಾಷನಲ್ ಕಾಲೇಜಿನಲ್ಲಿ ಬಿಎಸ್ಸಿ ಆನರ್ಸ್ ಹಾಗೂ ಸೆಂಟ್ರಲ್ ಕಾಲೇಜಿನಲ್ಲಿ ಎಂಎಸ್ಸಿ ಸ್ನಾತಕೋತ್ತರ ಪದವಿ ಪಡೆದಿದ್ದಾರೆ. ೧೯೭೪ರಲ್ಲಿ ಎನ್‌ಎಎಲ್ ಸೇರಿದ ಅವರು, ಸಿಎಸ್‌ಐಆರ್ ಫೆಲೋಶಿಪ್ ಪಡೆದು ಮೈಸೂರು ವಿಶ್ವವಿದ್ಯಾಲಯದಿಂದ ಪಿಎಚ್.ಡಿ ಗಳಿಸಿದರು. ೧೯೮೨ರಲ್ಲಿ ವಿಜ್ಞಾನಿಯಾಗಿ ವೃತ್ತಿ ಜೀವನ ಆರಂಭಿಸಿ ಮೆಟೀರಿಯಲ್ ಸೈನ್ಸ್ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಂಡರು. ಪೈಲಟ್‌ಗಳು ವಿಮಾನ ಓಡಿಸುವ ಹಾಗೂ ನಿಗದಿತ ನಿಲ್ದಾಣಗಳಲ್ಲಿ ಇಳಿಸಲು ಸೂಕ್ತ ಮಾರ್ಗದರ್ಶನ ನೀಡುವ ‘ದೃಷ್ಟಿ’ ತಂತ್ರಜ್ಞಾನವನ್ನು ಶುಭಾ ಅಭಿವೃದ್ಧಿಪಡಿಸಿದ್ದಾರೆ. ಈಗ ವಾಯುಪಡೆಯಲ್ಲೂ ಇದೇ ತಂತ್ರಜ್ಞಾನ ಬಳಕೆಯಾಗುತ್ತಿದೆ. ಹೈದರಾಬಾದಿನ ಡಿಆರ್‌ಡಿಎಲ್ ರೂಪಿಸಿದ ’ಅಗ್ನಿ ಮಿಸೈಲ್’ ಯೋಜನೆಯಲ್ಲೂ ಹಾಗೂ ಏರೋಸ್ಪೇಸ್‌ಗೆ ಸಂಬಂಧಿಸಿದ ಹಲವು ಸಂಶೋಧನೆಗಳಲ್ಲೂ ಡಾ. ಶುಭಾ ವೆಂಕಟೇಶ ಅಯ್ಯಂಗಾರ್ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ. ಪದ್ಮಶ್ರೀ ಪ್ರಶಸ್ತಿ ಲಭಿಸಿದ ಕುರಿತು ಡಾ. ಶುಭಾ ವೆಂಕಟೇಶ ಅಯ್ಯಂಗಾರ್ ಅವರು ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ: ಡಾ. ಶುಭಾ ವೆಂಕಟೇಶ ಅಯ್ಯಂಗಾರ್ ( ೩೦ ಸೆಕೆಂಡ್ಸ್)**

**<>><><*><><<>**

ಜಿಂಬಾಬ್ವೆಯ ಬುಲವಾಯೊದ ಕ್ವೀನ್ಸ್ ಸ್ಪೋರ್ಟ್ಸ್ ಕ್ಲಬ್‌ನಲ್ಲಿ ಇಂದು ನಡೆಯುತ್ತಿರುವ ಹತ್ತೊಂಬತ್ತು ವರ್ಷದೊಳಗಿನವರ ಪುರುಷರ ಕ್ರಿಕೆಟ್ ವಿಶ್ವಕಪ್‌ನ ಸೂಪರ್ ಸಿಕ್ಸ್ ಹಂತದ ೬ನೇ ಪಂದ್ಯದಲ್ಲಿ ಭಾರತ ಮತ್ತು ಜಿಂಬಾಬ್ವೆ ತಂಡ ಮುಖಾಮುಖಿಯಾಗಿವೆ. ಟಾಸ್ ಗೆದ್ದ ಜಿಂಬಾಬ್ವೆ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ಭಾರತ, ಇತ್ತೀಚಿನ ವರದಿ ಬಂದಾಗ ೩ ಓವರ್‌ಗಳಲ್ಲಿ ಯಾವುದೇ ವಿಕೆಟ್ **ನಷ್ಟವಿಲ್ಲದೆ ೩೫ ರನ್ ಮಾಡಿ ಆಡುತ್ತಿದೆ.**

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ><><<>**